## ಸರಕಾರಕ್ಕೆ ಹೈಕೋರ್ಟ್ ನೋಟಿಸ್ | ನಾಲ್ಕು ವಾರಗಳಲ್ಲಿ ಆಕ್ಷೇಪ ಸಲ್ಲಿಸಲು ಸೂಚನೆ

# ಎಸ್ಸಿ, ಎಸ್ಟಿ ಆಯೋಗದ ಅಧ್ಯಕ್ಷರ ಆಯ್ಕೆ ಪ್ರಶ್ನಿಸಿ ಅರ್ಜಿ

**ವಿಕ ಸುದ್ದಿಲೋಕ** ಬೆಂಗಳೂರು 6/1/21

ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಆಯೋಗದ



ಅಧ್ಯಕ್ಷರನ್ನಾಗಿ ಶಾಸಕ ನೆಹರು ಓಲೇಕಾರ್ ಅವರನ್ನು ನೇಮಕ ಮಾಡಿರುವ ಕ್ರಮ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಹೈಕೋರ್ಟ್ ಮಂಗಳವಾರ ರಾಜ್ಯ ಸರಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ.

ಕೆ.ಸಿ. ರಾಜಣ್ಣ ಸಲ್ಲಿಸಿದ್ದ ಪಿಐಎಲ್ ಸಿಜೆ ಎ.ಎಸ್.ಓಕ್ ಹಾಗೂ ನ್ಯಾ. ಸತೀಶ್‌ಚಂದ್ರ ಶರ್ಮಾ ಅವರಿದ್ದ ವಿಭಾಗೀಯ ನ್ಯಾಯ ಪೀಠದ ಮುಂದೆ ವಿಚಾರಣೆಗೆ ಬಂದಿತ್ತು.

ಕೆಲ ಕಾಲ ಅರ್ಜಿದಾರರ ವಾದ ಆಲಿಸಿದ ನ್ಯಾಯಪೀಠ, ಅರ್ಜಿ ಸಂಬಂಧ ಪ್ರತಿವಾದಿಗಳಾದ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಆಯೋಗದ ಅಧ್ಯಕ್ಷ ನೆಹರು ಓಲೇಕಾರ್, ಆಯೋಗದ ಸದಸ್ಯ ಕಾರ್ಯದರ್ಶಿಗೆ ನೋಟಿಸ್ ಜಾರಿಗೊಳಿಸಿ ನಾಲ್ಕು ವಾರಗಳಲ್ಲಿ ಆಕ್ಷೇಪಣೆ ಸಲ್ಲಿಸಲು ಸೂಚಿಸಿ ವಿಚಾರಣೆಯನ್ನು ಮುಂದೂಡಿತು.

ಅರ್ಜಿದಾರರ ಪರ ವಕೀಲ ಎಸ್. ಉಮಾಪತಿ, "ಸಿವಿಲ್ ಕೋರ್ಟ್ ದರ್ಜೆ ಹೊಂದಿರುವ ಎಸ್ಸಿ, ಎಸ್ಟಿ ಆಯೋಗಕ್ಕೆ ರಾಜಕೀಯ ವ್ಯಕ್ತಿಯನ್ನು ನೇಮಕ ಮಾಡಲಾಗಿದೆ. ಅಷ್ಟೇ ಅಲ್ಲದೆ, ನೆಹರು ಓಲೇಕಾರ್ ವಿರುದ್ಧ ನಾಲ್ಕು ಕ್ರಿಮಿನಲ್ ಪ್ರಕರಣಗಳಿವೆ. ಇಂತಹ ಕ್ರಿಮಿನಲ್ ಹಿನ್ನೆಲೆ ಹೊಂದಿರುವ ವ್ಯಕ್ತಿಯನ್ನು ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದು ಸಂವಿಧಾನ ಬಾಹಿರವಾಗಿದೆ," ಎಂದರು.

ಅಲ್ಲದೆ, "ನೇಮಕದ ವೇಳೆ ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ಪಂಗಡಗಳ ಆಯೋಗ ಕಾಯಿದೆ-2002ರ ಆಯ್ಕೆ ಮಾನದಂಡಗಳನ್ನು ಕಡೆಗಣಿಸಲಾಗಿದೆ. ಹಾಗಾಗಿ, ಈ ನೇಮಕವನ್ನು ರದ್ದುಪಡಿಸಬೇಕು," ಎಂದರು.

ಆಯೋಗದ ಅಧ್ಯಕ್ಷರನ್ನು ನೇಮಕ ಮಾಡಿ 2020ರ ನ.27ರಂದು ಸರಕಾರ ಹೊರಡಿಸಿದ ಆದೇಶದ ಸಂಪೂರ್ಣ ಕಡತವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಸೂಚಿಸಬೇಕು. ನೆಹರು ಓಲೇಕಾರ್ ಆಯೋಗದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸದಂತೆ ನಿರ್ದೇಶನ ನೀಡಬೇಕು. ಅರ್ಜಿ ಇತ್ಯರ್ಥಗೊಳ್ಳುವವರೆಗೆ ನೇಮಕ ಆದೇಶಕ್ಕೆ ತಡೆ ನೀಡಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

## ಖುಲಾಸೆ ಕೇಸ್‌ಗಳ ಮರುಪರಿಶೀಲನೆಗೆ ಮಾರ್ಗಸೂಚಿ ಹೊರಡಿಸಲು ನಿರ್ದೇಶನ

**ಬೆಂಗಳೂರು:** ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ತಡೆ ಕಾಯಿದೆ-1989 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಧಿನಿಯಮ -1995ರಡಿ ದಾಖಲಾಗಿ ಖುಲಾಸೆಗೊಂಡ ಪ್ರಕರಣಗಳ ಮರುಪರಿಶೀಲನೆಗೆ ಮಾರ್ಗಸೂಚಿಗಳನ್ನು ನಿಗದಿ ಮಾಡಿ ಮೂರು ವಾರಗಳಲ್ಲಿ ಆದೇಶ ಹೊರಡಿಸುವಂತೆ ಹೈಕೋರ್ಟ್, ಸರಕಾರಕ್ಕೆ ಆದೇಶಿಸಿದೆ.



ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲ್ವಿಚಾರಣೆ ಮತ್ತು ಬಲವರ್ಧನೆ ಸಂಘದ ಸಂಚಾಲಕಿ ಪಿ. ಯಶೋಧ ಹಾಗೂ ವಕೀಲ ಎಸ್. ಉಮಾಪತಿ ಸಲ್ಲಿಸಿರುವ ಪಿಐಎಲ್‌ಗಳನ್ನು ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ಖುಲಾಸೆ ಪ್ರಕರಣಗಳನ್ನು ಮರುಪರಿಶೀಲನೆ ನಡೆಸಬೇಕಿರುವ ಜಿಲ್ಲಾ ಹಾಗೂ ಉಪ ವಿಭಾಗ ಮಟ್ಟದ ಸಮಿತಿಗಳ ಸಭೆಗಳು ಹೇಗೆ ನಡೆಯಬೇಕು ಎಂಬ ಕುರಿತು ಮೂರು ವಾರಗಳಲ್ಲಿ ಮಾರ್ಗಸೂಚಿ ಹೊರಡಿಸುವಂತೆ ನ್ಯಾಯಾಲಯ ಸರಕಾರಕ್ಕೆ ನಿರ್ದೇಶನ ನೀಡಿತು.

ಅಲ್ಲದೆ, 2020ರ ಡಿ.14ರ ಕೋರ್ಟ್ ಆದೇಶದಂತೆ ಜಿಲ್ಲಾ ಮತ್ತು ಉಪವಿಭಾಗ ಮಟ್ಟದ ಜಾಗರೂಕತೆ ಮತ್ತು ಉಸ್ತುವಾರಿ ಸಮಿತಿಗಳ ಎಲ್ಲಾ ಸಭೆಗಳನ್ನು ಈ ತಿಂಗಳಾಂತ್ಯಕ್ಕೆ ಕಡ್ಡಾಯವಾಗಿ ನಡೆಸಬೇಕು. ಕಾಯಿದೆಯನ್ವಯ ತುರ್ತು ಸ್ಪಂದನೆ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ರೂಪಿಸಲಾಗುವುದು ಎಂಬ ಬಗ್ಗೆ ಮುಂದಿನ ವಿಚಾರಣೆ ವೇಳೆ ತಿಳಿಸಬೇಕು ಎಂದು ಸೂಚಿಸಿ ವಿಚಾರಣೆಯನ್ನು ಫೆ.12ಕ್ಕೆ ಮುಂದೂಡಿತು.

ಅಲ್ಲದೆ, 2015ರಿಂದ 2020ರವರೆಗಿನ ಎಸ್ಸಿ, ಎಸ್ಟಿ ದೌರ್ಜನ್ಯ ಪ್ರಕರಣಗಳಲ್ಲಿ ಖುಲಾಸೆಯಾಗಿರುವ ಕೇಸ್‌ಗಳ ಸಮಗ್ರ ವಿವರಗಳನ್ನು ಸಲ್ಲಿಸಬೇಕು ಎಂದು ನ್ಯಾಯಪೀಠ ಸರಕಾರಕ್ಕೆ ನಿರ್ದೇಶನ ನೀಡಿದೆ.